ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018-19

ದಿನಾಂಕ: 25-08-2018

ಗೆ,

ಮಾನ್ಯ ಮುಖ್ಯ ಕಾರ್ಯದರ್ಶಿಯವರ
ಆಪ್ತ ಕಾರ್ಯದರ್ಶಿಯವರು,
ಕರ್ನಾಟಕ ಸರ್ಕಾರ
ವಿಧಾನ ಸೌಧ, ಬೆಂಗಳೂರು.

ಮಾನ್ಯರೇ,

ವಿಷಯ: ಕೊಡಗು ಜಿಲ್ಲೆಯಾದ್ಯಂತ ಭಾರಿ ಮಳೆಯಾಗುತ್ತಿದ್ದು, ಪ್ರಕೃತಿ ವಿಕೋಪದಡಿ ಸಂತ್ರಸ್ಥರಾದವರಿಗೆ ಪರಿಹಾರ ವಿತರಣೆ ಮತ್ತು ಪುನರ್‌ವಸತಿ ಕಾರ್ಯ ಪ್ರಗತಿಯಲ್ಲಿದ್ದು, ಜಿಲ್ಲೆಗೆ ನಿಯೋಜಿಸಲಾಗಿದ್ದ ಅಧಿಕಾರಿಗಳ ಸೇವೆಯನ್ನು ಮುಂದುವರೆಸುವ ಕುರಿತು.

ಉಲ್ಲೇಖ: ಮಾನ್ಯ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ ರವರ ಟಿಪ್ಪಣಿ ಸಂಖ್ಯೆ: ಮುಕಾ/121/2018 ದಿನಾಂಕ 19.08.2018

-----------

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಈ ಸಂಬಂಧ ಪರಿಹಾರ ಕಾರ್ಯದಲ್ಲಿ ಕೊಡಗು ಜಿಲ್ಲಾಡಳಿತಕ್ಕೆ ಸಹಕರಿಸಲು **ಡಾ: ರಿಚರ್ಡ್ ವಿನ್ಸೆಂಟ್ ಡಿಸೋಜ**, ಐ.ಎ.ಎಸ್., ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ನಿಗಮ (ನಿಯಮಿತ), ಬೆಂಗಳೂರು ಹಾಗೂ **ಚಾರುಲತಾ ಸೋಮಲ್**, ಐ.ಎ.ಎಸ್., ಆಯುಕ್ತರು, ನಗರ ಪಾಲಿಕೆ, ಶಿವಮೊಗ್ಗ ಇವರುಗಳನ್ನು ಉಲ್ಲೇಖದ ಮಾನ್ಯ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿಯಂತೆ ನಿಯೋಜಿಸಲಾಗಿರುತ್ತದೆ. ನಿಯೋಜಿತ ಅಧಿಕಾರಿಗಳು ಸಮರೋಪಾದಿಯಲ್ಲಿ ಹಾಗೂ ಪ್ರಶಂಸನೀಯ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.

ಪ್ರಸ್ತುತ, ಜಿಲ್ಲೆಯಲ್ಲಿ ಪರಿಹಾರ, ಪುನರ್ವಸತಿ, ಮೂಲ ಸೌಕರ್ಯ ವ್ಯವಸ್ಥೆ / ಪುನರ್‌ನಿರ್ಮಾಣ ಕಾರ್ಯ ಪ್ರಗತಿಯಲ್ಲಿದ್ದು, ಪರಿಸ್ಥಿತಿ ಹತೋಟಿಗೆ ಬರುವವರೆಗೆ ಮೇಲ್ಕಾಣಿಸಿದ ಅಧಿಕಾರಿಗಳ ಸೇವೆ ಜಿಲ್ಲೆಗೆ ಅಗತ್ಯವಿರುವುದರಿಂದ ಅವರುಗಳ ನಿಯೋಜನೆಯನ್ನು ಮುಂದುವರೆಸಲು ಕೋರಿದೆ ವಿಚಾರವನ್ನು ಮಾನ್ಯ ಮುಖ್ಯ ಕಾರ್ಯದರ್ಶಿಯವರ ಅವಗಾಹನೆಗೆ ತರಲು ಕೋರಿದೆ.

ತಮ್ಮ ನಂಬುಗೆಯ,

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

25-8-18
ಜಿಲ್ಲಾಧಿಕಾರಿಯವರ ಕಛೇರಿ
ಕೊಡಗು ಜಿಲ್ಲೆ, ಮಡಿಕೇರಿ